
ಕನ್ನಡಪ್ರಭ

# ಕೌನ್ಸೆಲಿಂಗ್ ಮೂಲಕ ವರ್ಗಾವಣೆಯಿಂದ ಸರ್ಕಾರದ ಇಮೇಜ್ ಹೆಚ್ಚಳ: ಹೊರಟ್ಟಿ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಪ್ರಸ್ತುತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ಕೌನ್ಸೆಲಿಂಗ್ ಮೂಲಕ ಯಾವುದೇ ಗೊಂದಲವಿಲ್ಲದೇ ಪಾರದರ್ಶಕವಾಗಿ ವರ್ಗಾವಣೆಗೊಂಡಿರುವ ಮಾಹಿತಿ ಕೇಳಿ ಸಂತಸವಾಗಿದೆ ಎಂದು ವಿಪ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿ, ನಾನು 2006-07ರಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವನಾದಾಗ ದೇಶದಲ್ಲಿಯೇ ಮೊದಲಬಾರಿ ಪ್ರಾಥಮಿಕ ಹಂತದಿಂದ ಪದವಿಪೂರ್ವ ಹಂತದ ವರೆಗಿನ ಶಾಲಾ- ಕಾಲೇಜು ಶಿಕ್ಷಕರ ವರ್ಗಾವಣೆಗೆ ಕೌನ್ಸೆಲಿಂಗ್ ಪ್ರಕ್ರಿಯೆಗೆ ಚಾಲನೆ ನೀಡಿದ್ದೆ. ಆರಂಭದಲ್ಲಿ ಕೆಲ ಸಣ್ಣಪುಟ್ಟ ನ್ಯೂನ್ಯತೆಗಳು ವರ್ಗಾವಣೆ ನೀತಿಯಲ್ಲಿದ್ದರೂ ಕಾಲಕಾಲಕ್ಕೆ ಬದಲಾವಣೆ ಆಗುವ ಮೂಲಕ ಪ್ರಸ್ತುತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ವರ್ಗಾವಣೆ ನೀತಿಯ ಲಾಭ ಪಡೆದಿದ್ದಾರೆ. ಇದೊಂದು ದಾಖಲೆಯ ವರ್ಗಾವಣೆ ಎಂಬ ಮಾಹಿತಿ ಕೂಡ ಇಲಾಖೆಯಿಂದ ಇದೆ.

ವರ್ಗಾವಣೆ ಕುರಿತು ಸಾಕಷ್ಟು ಅನುಮಾನಗಳು ಇಲ್ಲಸಲ್ಲದ ಆರೋಪಗಳು ಇಂದಿನ ದಿನಮಾನಗಳಲ್ಲಿ ಕೇಳುತ್ತಿದ್ದೇವೆ. 2006-07ರ ಪೂರ್ವದಲ್ಲಿಯೂ ಶಿಕ್ಷಣ ಇಲಾಖೆಯಲ್ಲಿ ವರ್ಗಾವಣೆಯ ಒಂದು ದೊಡ್ಡ ಜಾಲವೇ ಇತ್ತು. ನೂರಾರು ಕೋಟಿ ವರ್ಗಾವಣೆಯ ಮೂಲಕ ನಡೆಯುತ್ತಿತ್ತು ಎಂಬ ಮಾಹಿತಿ ಸಹ ಕೇಳುತ್ತಾ ಬಂದಿದ್ದೆ. ಇದಕ್ಕೊಂದು ಇತಿಶ್ರೀ ಹಾಡಬೇಕೆಂಬ ದೃಢ ಸಂಕಲ್ಪದಿಂದ ಉತ್ತಮ ಅಧಿಕಾರಿಗಳ ತಂಡ ಕಟ್ಟಿಕೊಂಡು ದೇಶದಲ್ಲಿಯೇ ಮೊದಲಬಾರಿ ವರ್ಗಾವಣೆ ನೀತಿ ಜಾರಿಗೊಳಿಸುವ ಮೂಲಕ ಯಾವೊಬ್ಬ ಶಿಕ್ಷಕರು ಜನಪ್ರತಿನಿಧಿಗಳ ಬಳಿ ಬರದ ಹಾಗೆ, ಹಾಗೂ ವಿಧಾನಸೌಧದ ಸುತ್ತದ ಹಾಗೆ ನೋಡಿಕೊಂಡಿದ್ದು ಈ ವರ್ಗಾವಣೆ ನೀತಿಯಿಂದ. ಇದರಿಂದಾಗಿ ಶಿಕ್ಷಣ ಇಲಾಖೆ ವರ್ಗಾವಣೆ ವಿಷಯದಲ್ಲಿ ಕೆಟ್ಟ ಹೆಸರನ್ನು ಪಡೆದುಕೊಳ್ಳದೇ ಇಲ್ಲ-ಸಲ್ಲದ ಆರೋಪದಿಂದ ಮುಕ್ತವಾಗಿರುವುದಕ್ಕೆ ಖುಷಿ ಎನಿಸುತ್ತದೆ. ಪ್ರಸ್ತುತ ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಇಲಾಖೆಯಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾ ವಣೆಗೊಳ್ಳುತ್ತಿರುವುದರಿಂದ ಅಲ್ಲಿನ ಸಿಬ್ಬಂದಿ ನಿರಾಳವಾಗಿ ಕೆಲಸ ಮಾಡುವಂತಾಗಿದೆ. ಎಲ್ಲ ಇಲಾಖೆಗಳ ಸಿಬ್ಬಂದಿಯನ್ನು ಕೌನ್ಸೆಲಿಂಗ್ ಮೂಲಕ ವರ್ಗಾವಣೆಗೊಳಿಸುವ ಪದ್ಧತಿಯನ್ನು ಅಳವಡಿಸಿಕೊಂಡರೆ ಅನಾವಶ್ಯಕವಾಗಿ ಉಂಟಾಗುವ ಇಲ್ಲಸಲ್ಲದ ಆರೋಪಗಳಿಂದ ಮುಕ್ತರಾ ಗಬಹುದು. ಹಾಗೂ ಸಾರ್ವಜನಿಕರಿಂದ ಸರ್ಕಾರಕ್ಕೆ ಆಗುವ ಮುಜುಗರವನ್ನು ತಪ್ಪಿಸಿಕೊಳ್ಳಬಹುದು ಎಂದು ಸಲಹೆ ನೀಡಿದ್ದಾರೆ.


HUBBALLI Edition

# ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಸ್ವಾಗತಾರ್ಹ: ಬಸವರಾಜ ಹೊರಟ್ಟಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪ್ರಸಕ್ತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ಕೌನ್ಸೆಲಿಂಗ್ ಮೂಲಕ ಯಾವುದೇ ಗೊಂದಲವಿಲ್ಲದೇ ಪಾರದರ್ಶಕವಾಗಿ ವರ್ಗಾವಣೆಗೊಂಡಿರುವ ಮಾಹಿತಿ ಕೇಳಿ ಸಂತಸವಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ತಿಳಿಸಿದ್ದಾರೆ.

ಆರಂಭದಲ್ಲಿ ಕೆಲ ಸಣ್ಣಪುಟ್ಟ ನ್ಯೂನತೆಗಳು ವರ್ಗಾವಣೆ ನೀತಿಯಲ್ಲಿದ್ದರೂ, ಕಾಲಕಾಲಕ್ಕೆ ಬದಲಾವಣೆ ಆಗುವ ಮೂಲಕ ಪ್ರಸಕ್ತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ವರ್ಗಾವಣೆ ನೀತಿಯ ಲಾಭ ಪಡೆದಿದ್ದು, ಇದೊಂದು ದಾಖಲೆಯ ವರ್ಗಾವಣೆಯಾಗಿದೆ. ವರ್ಗಾವಣೆ ಕುರಿತು ಸಾಕಷ್ಟು ಅನುಮಾನಗಳು, ಇಲ್ಲಸಲ್ಲದ ಆರೋಪಗಳನ್ನು ಇಂದಿನ ದಿನಮಾನಗಳಲ್ಲಿ ಕೇಳುತ್ತಿದ್ದೇವೆ. 2006-07ರ ಪೂರ್ವದಲ್ಲಿಯೂ ಶಿಕ್ಷಣ ಇಲಾಖೆಯಲ್ಲಿ ವರ್ಗಾವಣೆಯ ಒಂದು ದೊಡ್ಡ ಜಾಲವೇ ಇತ್ತು. ಯಾವೊಬ್ಬ ಶಿಕ್ಷಕರು ಜನಪ್ರತಿನಿಧಿಗಳ ಬಳಿ ಬರದ ಹಾಗೆ, ವಿಧಾನಸೌಧ ಸುತ್ತದ ಹಾಗೆ ನೋಡಿಕೊಂಡಿದ್ದು, ಈ ವರ್ಗಾವಣೆ ನೀತಿಯಿಂದಾಗಿ ಶಿಕ್ಷಣ ಇಲಾಖೆ ವರ್ಗಾವಣೆ ವಿಷಯದಲ್ಲಿ ಕೆಟ್ಟ ಹೆಸರನ್ನು ಪಡೆದುಕೊಳ್ಳದೇ ಇಲ್ಲಸಲ್ಲದ ಆರೋಪದಿಂದ ಮುಕ್ತವಾಗಿರುವುದು ಹೆಮ್ಮೆಯ ಸಂಗತಿ.




ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಇಲಾಖೆಯಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆಗೊಳ್ಳುತ್ತಿರುವುದರಿಂದ ಅಲ್ಲಿನ ಸಿಬ್ಬಂದಿ ನಿರಾಳವಾಗಿ ಕೆಲಸ ಮಾಡುವಂತಾಗಿದೆ. ಪದೇ ಪದೇ ವರ್ಗಾವಣೆಯಿಂದಾಗಿ ಸಿಬ್ಬಂದಿ ಸಹ ತಮ್ಮ ಆತ್ಮವಿಶ್ವಾಸವನ್ನು ಕಳೆದುಕೊಂಡು ಕ್ರಿಯಾಶೀಲವಾಗಿ ಕೆಲಸ ಮಾಡಲು ಹಿಂದೇಟು ಹಾಕುತ್ತಾರೆ. ಎಲ್ಲ ಇಲಾಖೆಗಳಲ್ಲಿ ವರ್ಗಾವಣೆ ನೀತಿಯನ್ನು ಅಳವಡಿಸಿಕೊಡು ಕೌನ್ಸೆಲಿಂಗ್ ಮೂಲಕ ಪಾರದರ್ಶಕವಾಗಿ ವರ್ಗಾಯಿಸುವ ಪ್ರಕ್ರಿಯೆಗೆ ಚಾಲನೆ ನೀಡಿದರೆ ಸರ್ಕಾರದ ಘನತೆಯೂ ಹೆಚ್ಚುತ್ತದೆ ಎಂಬ ಕಳಕಳಿಯನ್ನು ಹೊರಟ್ಟಿಯವರು ವ್ಯಕ್ತಪಡಿಸಿದ್ದಾರೆ ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

# ಕೌನ್ಸಿಲಿಂಗ್ ಮೂಲಕ ವರ್ಗಾವಣೆಗಳಿಂದ ಸರ್ಕಾರದ ಇಮೇಜ್ ಹೆಚ್ಚಿಗೆ : ಹೊರಟ್ಟಿ

**ಗದಗ ಸಂಜೆ ವಾರ್ತೆ**

ಹುಬ್ಬಳ್ಳಿ : ಪ್ರಸ್ತುತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ಕೌನ್ಸಿಲಿಂಗ್ ಮೂಲಕ ಯಾವುದೇ ಗೊಂದಲವಿಲ್ಲದೇ ಪಾರದರ್ಶಕವಾಗಿ ವರ್ಗಾವಣೆ ಗೊಂಡಿರುವ ಮಾಹಿತಿ ಕೇಳಿ ನನಗಂತೂ ಸಾಕಷ್ಟು ಖುಷಿ ಹಾಗೂ ಸಂತಸವಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಖುಷಿ ಹಂಚಿಕೊಂಡಿದ್ದಾರೆ.

ನಾನು 2006–07ರಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವನಾದಾಗ ದೇಶದಲ್ಲಿಯೇ ಮೊದಲಬಾರಿ ಪ್ರಾಥಮಿಕ ಹಂತದಿಂದ ಪದವಿಪೂರ್ವ ಹಂತದವರೆಗಿನ ಶಾಲಾ ಕಾಲೇಜು ಶಿಕ್ಷಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮಾಡುವ ಮೂಲಕ ವರ್ಗಾವಣೆ ಪ್ರಕ್ರಿಯೆಗೆ ಚಾಲನೆ ನೀಡಿದ್ದೆ. ಆರಂಭದಲ್ಲಿ ಕೆಲ ಸಣ್ಣಪುಟ್ಟ ನ್ಯೂನ್ಯತೆಗಳು ವರ್ಗಾವಣೆ ನೀತಿಯಲ್ಲಿದ್ದರೂ ಕಾಲಕಾಲಕ್ಕೆ ಬದಲಾವಣೆ ಆಗುವ ಮೂಲಕ ಪ್ರಸ್ತುತ ಸಾಲಿನಲ್ಲಿ 30 ಸಾವಿರಕ್ಕೂ ಹೆಚ್ಚು ಶಿಕ್ಷಕರು ವರ್ಗಾವಣೆ ನೀತಿಯ ಲಾಭ ಪಡೆದಿದ್ದಾರೆ. ಇದೊಂದು ದಾಖಲೆಯ ವರ್ಗಾವಣೆ ಎಂಬ ಮಾಹಿತಿಕೂಡಾ ಇಲಾಖೆಯಿಂದ ಇದೆ. ವರ್ಗಾವಣೆ ಕುರಿತು ಸಾಕಷ್ಟು ಅನುಮಾನಗಳು ಇಲ್ಲಸಲ್ಲದ ಆರೋಪಗಳು ಇಂದಿನ ದಿನಮಾನಗಳಲ್ಲಿ ಕೇಳುತ್ತಿದ್ದೇವೆ. 2006–07ರ ಪೂರ್ವದಲ್ಲಿಯೂ ಶಿಕ್ಷಣ ಇಲಾಖೆಯಲ್ಲಿ ವರ್ಗಾವಣೆಯ ಒಂದು ದೊಡ್ಡ ಜಾಲವೇ ಇತ್ತು. ನೂರಾರು ಕೋಟಿ ವರ್ಗಾವಣೆಯ ಮೂಲಕ ನಡೆಯುತ್ತಿತ್ತು ಎಂಬ ಮಾಹಿತಿ ಸಹ ಕೇಳುತ್ತಾ ಬಂದಿದ್ದೆ. ಇದಕ್ಕೊಂದು ಇತಿಹಾಡಬೇಕೆಂಬ ದೃಢಸಂಕಲ್ಪದಿಂದ ಉತ್ತಮ ಅಧಿಕಾರಿಗಳ ತಂಡ ಕಟ್ಟಿಕೊಂಡು ದೇಶದಲ್ಲಿಯೇ ಮೊದಲಬಾರಿ ವರ್ಗಾವಣೆ ನೀತಿಯನ್ನು ಜಾರಿಗೊಳಿಸುವ ಮೂಲಕ ಯಾವೊಬ್ಬ ಶಿಕ್ಷಕರು ಜನಪ್ರತಿನಿಧಿಗಳ ಬಳಿ ಬರದ ಹಾಗೆ, ಹಾಗೂ ವಿಧಾನಸೌಧದ ಸುತ್ತದ ಹಾಗೆ ನೋಡಿಕೊಂಡಿದ್ದು ಈ ವರ್ಗಾವಣೆ ನೀತಿಯಿಂದ ಇದರಿಂದಾಗಿ ಶಿಕ್ಷಣ ಇಲಾಖೆ ವರ್ಗಾವಣೆ ವಿಷಯದಲ್ಲಿ ಕೆಟ್ಟ ಹೆಸರನ್ನು ಪಡೆದುಕೊಳ್ಳದೇ ಇಲ್ಲ ಸಲ್ಲದ ಆರೋಪದಿಂದ ಮುಕ್ತವಾಗಿರುವುದಕ್ಕೆ ಖುಷಿ ಎನಿಸುತ್ತದೆ.



ಇತ್ತೀಚಿನ ಸರ್ಕಾರಗಳು ವರ್ಗಾವಣೆ ವಿಷಯದಲ್ಲಿ ಕೆಟ್ಟ ಹೆಸರನ್ನು ತೆಗೆದುಕೊಳ್ಳುತ್ತಿವೆ. ವರ್ಗಾವಣೆಯ ಪ್ರಕ್ರಿಯೆಗಳು 2–3 ತಿಂಗಳುಗಳ ಕಾಲ ಹಾಗೂ ಕೆಲವೊಂದು ಬಾರಿ ವರ್ಷದುದ್ದಕ್ಕೂ ನಡೆಯುತ್ತಿರುವುದು ವಿಷಾದದ ಸಂಗತಿ. ಇದರಿಂದಾಗಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳ್ಳುತ್ತವೆ. ಸಾರ್ವಜನಿಕ ವಲಯದಲ್ಲಿ ಸರ್ಕಾರಕ್ಕೆ ಮುಜುಗರ ಸಹ ಉಂಟಾಗಿ ಪ್ರತಿಯೊಬ್ಬರು ವರ್ಗಾವಣೆಯಿಂದಾಗಿ ಕೋಟ್ಯಾಂತರ ಹಣ ಕೈಬದಲಾಗುತ್ತದೆ ಎಂಬ ಆರೋಪಗಳ ಕುರಿತು ಚರ್ಚೆ ಮಾಡುವ ಮೂಲಕ ಆಡಿಕೊಳ್ಳುವಂತಾಗಿದೆ. ಇದರಿಂದಾಗಿ ಸಾರ್ವಜನಿಕವಾಗಿಯೂ ಸರ್ಕಾರಕ್ಕೆ ಮುಜುಗರ.

ಪ್ರಸ್ತುತ ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಇಲಾಖೆಯಲ್ಲಿ ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಳ್ಳುತ್ತಿರುವುದರಿಂದ ಅಲ್ಲಿನ ಸಿಬ್ಬಂದಿ ನಿರಾಳವಾಗಿ ಕೆಲಸಮಾಡುವಂತಾಗಿದೆ. ಪದೇ ಪದೇ ವರ್ಗಾವಣೆಯಿಂದಾಗಿ ಸಿಬ್ಬಂದಿ ಸಹ ತಮ್ಮ ಆತ್ಮವಿಶ್ವಾಸವನ್ನುಕಳೆದುಕೊಂಡು ಕ್ರೀಯಾಶೀಲವಾಗಿ ಕೆಲಸಮಾಡಲು ಹಿಂದೇಟು ಹಾಕುತ್ತಾರೆ. ಸರ್ಕಾರ–ಕ್ಕೆ ಜನಪ್ರತಿನಿಧಿಗಳಿಗೆ ಒಂದು ಉತ್ತಮ ಹೆಸರು ಬರಬೇಕಾದರೆ ಈ ವರ್ಗಾವಣೆಯ ನೀತಿಯನ್ನೇ ಬದಲಿಸಬೇಕು. ಪ್ರಸ್ತುತ ಇರುವ ವರ್ಗಾವಣೆಯ ವಿಧಾನದಿಂದಾಗಿ ಸಾರ್ವಜನಿಕ ಕ್ಷೇತ್ರದಲ್ಲಿ ಇಲ್ಲಸಲ್ಲದ ಆರೋಪಗಳು, ಪ್ರತ್ಯಾರೋಪಗಳನ್ನು ಕೇಳುವುದೇ ಸಾರ್ವಜನಿಕರಿಗೆ ರೂಢಿಯಾಗಿದೆ.

ಎಲ್ಲ ಇಲಾಖೆಗಳ ಸಿಬ್ಬಂದಿಯನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಳಿಸುವ ಪದ್ಧತಿಯನ್ನು ಅಳವಡಿಸಿಕೊಂಡರೆ ಅನಾವಶ್ಯಕವಾಗಿ ಉಂಟಾಗುವ ಇಲ್ಲಸಲ್ಲದ ಆರೋಪಗಳಿಂದ ಮುಕ್ತರಾಗಬಹುದು. ಹಾಗೂ ಸಾರ್ವಜನಿಕರಿಂದ ಸರ್ಕಾರ–ಕ್ಕೆ ಆಗುವ ಮುಜುಗರವನ್ನು ತಪ್ಪಿಸಿಕೊಳ್ಳಬಹುದು. ಎಲ್ಲ ಇಲಾಖೆಗಳಲ್ಲಿ ವರ್ಗಾವಣೆ ನೀತಿಯನ್ನು ಅಳವಡಿಸಿಕೊಂಡು ಕೌನ್ಸಿಲಿಂಗ್ ಮೂಲಕ ಪಾರದರ್ಶಕವಾಗಿ ವರ್ಗಾಯಿಸುವ ಪ್ರಕ್ರಿಯೆಗೆ ಚಾಲನೆ ನೀಡಿದರೆ ಸರ್ಕಾರದ ಇಮೇಜು ಸಹ ಹೆಚ್ಚುತ್ತದೆ ಎಂಬ ಕಳಕಳಿನನ್ನದಾಗಿದೆ. ಈ ದಿಕ್ಕಿನತ್ತ ಮುಖ್ಯಮಂತ್ರಿಗಳು ಆಲೋಚಿಸಲಿ ಎಂದು ಸಹ ಕೋರುತ್ತೇನೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ತಮ್ಮ ಮನದಾಳದ ಸಂಗತಿಗಳನ್ನು ತೆರೆದಿಟ್ಟಿದ್ದಾರೆ. ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.